# All India Radio: Bangalore
# Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**02.05.2026 / 2.30 p.m.**

**<><><><>**

ಮುಖ್ಯಾಂಶಗಳು

1. ಜಾಗತಿಕ ಮಾರುಕಟ್ಟೆಯಲ್ಲಿನ ಏರಿಳಿತದಿಂದ ವಾಣಿಜ್ಯ ಎಲ್‌ಪಿಜಿ ಅಡುಗೆ ಅನಿಲ ದರದಲ್ಲಿ ಏರಿಕೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
2. ಕ್ರೀಡಾ ಕ್ಷೇತ್ರದ ಬಲವರ್ಧನೆಗೆ ಕೇಂದ್ರದಿಂದ ಎಲ್ಲಾ ರೀತಿಯ ನೆರವು - ಡಾ.ಮನ್ಸುಖ್ ಮಾಂಡವೀಯಾ
3. ಜಾಗತಿಕ ತಾಪಮಾನ ಏರಿಕೆ ತಡೆಗೆ ಮರಗಳ ಸಂರಕ್ಷಣೆ ಅಗತ್ಯ - ಸಚಿವ ಈಶ್ವರ ಖಂಡ್ರೆ
4. ಬಿಎಸ್‌ಎನ್‌ಎಲ್ ಸುಧಾರಣೆಗೆ ಹೆಚ್ಚಿನ ಆದ್ಯತೆ ; ವಿಶ್ವೇಶ್ವರ ಹೆಗಡೆ ಕಾಗೇರಿ

<><><><>

ಜಾಗತಿಕ ಮಾರುಕಟ್ಟೆಯಲ್ಲಿನ ಏರಿಳಿತ ಹಾಗೂ ಯುದ್ಧದ ಸನ್ನಿವೇಶಗಳಿಂದಾಗಿ ವಾಣಿಜ್ಯ ಬಳಕೆಯ ಅಡುಗೆ ಅನಿಲ ದರದಲ್ಲಿ ಏರಿಕೆಯಾಗಿದೆಯೇ ಹೊರತು, ಇದರಲ್ಲಿ ಸರ್ಕಾರದ ಪಾತ್ರವಿಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಾಣಿಜ್ಯ ಬಳಕೆಯ ಸಿಲಿಂಡರ್‌ಗಳ ಬೆಲೆಯನ್ನು ತೈಲ ಕಂಪನಿಗಳೇ ನಿರ್ಧರಿಸುತ್ತವೆ. ಈ ಹಿಂದೆ ಯುಪಿಎ ಸರ್ಕಾರವಿದ್ದಾಗಲೇ ಬೆಲೆ ನಿರ್ಧಾರದ ಪ್ರಕ್ರಿಯೆಯನ್ನು ಉದಾರೀಕರಣ ಗೊಳಿಸಲಾಗಿತ್ತು. ಹಾಗಾಗಿ ಮಾರುಕಟ್ಟೆಯ ಸ್ಥಿತಿಗತಿಗಳಿಗೆ ಅನುಗುಣವಾಗಿ ದರಗಳು ನಿಗದಿಯಾಗುತ್ತವೆ ಎಂದರು. ಭಾರತವು ತನ್ನ ಅಗತ್ಯದ ಶೇಕಡ ೬೦ರಷ್ಟು ಅಡುಗೆ ಅನಿಲವನ್ನು ವಿದೇಶಗಳಿಂದ ಆಮದು ಮಾಡಿಕೊಳ್ಳುತ್ತಿದೆ. ಪ್ರಸ್ತುತ ಜಾಗತಿಕ ಮಟ್ಟದಲ್ಲಿ ನಡೆಯುತ್ತಿರುವ ಯುದ್ಧಗಳಿಂದಾಗಿ ಪೂರೈಕೆ ಸರಪಳಿಯಲ್ಲಿ ವ್ಯತ್ಯಯ ಉಂಟಾಗಿದೆ. ಹಾರ್ಮುಜ್ ಜಲಸಂಧಿಯ ಮೂಲಕ ಅನಿಲ ಪೂರೈಕೆಯಾಗುತ್ತಿದ್ದು, ಅಲ್ಲಿನ ಅಸ್ಥಿರತೆಯು ಬೆಲೆಯ ಮೇಲೆ ಪ್ರಭಾವ ಬೀರಿದೆ. ಜಾಗತಿಕವಾಗಿ ಬೆಲೆ ಇಳಿಕೆಯಾದ ತಕ್ಷಣ ದೇಶೀಯವಾಗಿಯೂ ದರ ತಗ್ಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ದೇಶದ ಇಂಧನ ಭದ್ರತೆಯನ್ನು ಕಾಪಾಡಲು ಮತ್ತು ಆಮದು ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಸರ್ಕಾರವು ದೇಶೀಯ ಉತ್ಪಾದನೆಗೆ ಹೆಚ್ಚಿನ ಒತ್ತು ನೀಡುತ್ತಿದೆ ಎಂದು ಅವರು ಪುನರುಚ್ಚರಿಸಿದರು.

**ಧ್ವನಿ : ಪ್ರಲ್ಹಾದ್ ಜೋಶಿ (೩೬ ಸೆಕೆಂಡ್‌ಗಳು)**

<><><><>

ಕೊಡಗಿನಲ್ಲಿ ಕ್ರೀಡಾಬೆಳವಣಿಗೆಯ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಎಲ್ಲಾ ರೀತಿಯ ಸಹಕಾರ ನೀಡಲು ಬದ್ಧವಾಗಿದೆ ಎಂದು ಕೇಂದ್ರ ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ ಘೋಷಿಸಿದ್ದಾರೆ. ಕೊಡಗು ಜಿಲ್ಲೆಯ ನಾಪೋಕ್ಲುವಿನಲ್ಲಿ ಆಯೋಜಿಸಿರುವ ೨೪ನೇ ವರ್ಷದ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಯ ಫೈನಲ್ ಪಂದ್ಯಾಟದ ವೇಳೆ ಮಾತನಾಡಿದ ಅವರು, ಕೊಡಗಿನಲ್ಲಿ ಹಾಕಿ ಅಕಾಡೆಮಿ ಸ್ಥಾಪನೆಗೆ ಕೇಂದ್ರ ಸರ್ಕಾರದಿಂದ ಎಲ್ಲಾ ರೀತಿಯ ನೆರವು ನೀಡಲಾಗುವುದು ಎಂದರು. ಗ್ರಾಮೀಣ ಪ್ರದೇಶ ಸೇರಿದಂತೆ ದೇಶಾದ್ಯಂತ ಕ್ರೀಡಾಪ್ರತಿಭೆಗಳನ್ನು ಬೆಳಕಿಗೆ ತರುವಲ್ಲಿ ಎಲ್ಲರೂ ಒಗ್ಗೂಡಬೇಕು ಎಂದು ಕರೆ ನೀಡಿದರು. ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಮತ್ತು ವೀರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ ಮಾತನಾಡಿ, ಭಾರತದ ಕ್ರೀಡಾಕ್ಷೇತ್ರಕ್ಕೆ ಕೊಡಗಿನ ಕೊಡುಗೆ ಅಪಾರವಾಗಿದೆ. ಕೊಡಗು ಜಿಲ್ಲೆಯ ಬಾಡಗ ಗ್ರಾಮದಲ್ಲಿ ೧೨ ಎಕರೆ ಜಾಗದಲ್ಲಿ ನಿರ್ಮಾಣವಾಗುತ್ತಿರುವ ಸುಸಜ್ಜಿತ ಕ್ರೀಡಾಸಂಕೀರ್ಣಕ್ಕೆ ಕೇಂದ್ರ ಕ್ರೀಡಾ ಇಲಾಖೆಯಿಂದ ಸೂಕ್ತ ಅನುದಾನ ನೀಡುವಂತೆ ಕೋರಿದರು. ಸಂಸದ ಯದುವೀರ್ ಒಡೆಯರ್, ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶ ಎ. ಬೋಪಣ್ಣ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

<><><><>

ಜಾಗತಿಕ ತಾಪಮಾನ ಏರಿಕೆಗೆ ವೃಕ್ಷ ಸಂವರ್ಧನೆ, ಸಂರಕ್ಷಣೆಯೇ ಮಾರ್ಗವಾಗಿದ್ದು, ಹಸಿರು ಹೊದಿಕೆ ಹೆಚ್ಚಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತ ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಜಿಲ್ಲಾ ಅರಣ್ಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಜಿಲ್ಲೆಯ ೭ ವಲಯಗಳಲ್ಲಿರುವ ನರ್ಸರಿಗಳಲ್ಲಿ ತೇಗ, ಶ್ರೀಗಂಧ, ಹೊನ್ನೆ ಮತ್ತಿತರ ಸಸಿಗಳನ್ನು ಬೆಳೆಸಿ ರೈತರಿಗೆ ವಿತರಿಸಬೇಕು ಎಂದರು. ಜಿಲ್ಲೆಯ ಹಲವೆಡೆ ಚಿರತೆಗಳ ಸಮಸ್ಯೆಯ ಪರಿಹಾರಕ್ಕೆ ಕೂಡಲೇ ಕ್ರಮಕೈಗೊಳ್ಳಬೇಕು. ಕಾಡಂಚಿನ ಗ್ರಾಮದ ಜನರೊಂದಿಗೆ ಸೌಹಾರ್ದ ಸಂಬಂಧ ಬೆಳೆಸಿಕೊಂಡು, ಕಾಡ್ಗಿಚ್ಚು, ಕಳ್ಳಬೇಟೆ, ಮತ್ತಿತರ ಅಪರಾಧ ತಡೆಗಟ್ಟಬೇಕು ಎಂದು ಸೂಚಿಸಿದರು. ಕಾಡಂಚಿನಲ್ಲಿರುವ ಪಟ್ಟಾ ಜಮೀನು, ಸರ್ಕಾರಿ ಜಾಗದಲ್ಲಿ ಬೆಳೆದಿರುವ ಶ್ರೀಗಂಧ, ರಕ್ತ ಚಂದನ, ಬೀಟೆ ಮತ್ತು ತೇಗದ ಮರಗಳ ಜಿಯೋ ಟ್ಯಾಗ್ ಮಾಡುವ ಮೂಲಕ ಯಾವುದೇ ಬೆಲೆ ಬಾಳುವ ವೃಕ್ಷ ಕಳುವಾಗದಂತೆ ಮುನ್ನೆಚ್ಚರಿಕೆ ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಇದೇ ವೇಳೆ, ಆನೆ-ಮಾನವ ಸಂಘರ್ಷ ನಿಯಂತ್ರಿಸಲು ಈ ತಿಂಗಳಲ್ಲೇ ರೈಲ್ವೆ ಬ್ಯಾರಿಕೇಡ್, ಆನೆ ಕಂದಕ ಹಾಗೂ ಸೌರಬೇಲಿ ನಿರ್ಮಾಣ ಕುರಿತಂತೆ ಸಭೆ ನಡೆಸುವುದಾಗಿಯೂ ಈಶ್ವರ ಖಂಡ್ರೆ ತಿಳಿಸಿದ್ದಾರೆ.

<><><><>

ಹೈಕೋರ್ಟ್ ಸಂಚಾರಿ ಹಾಗೂ ಖಾಯಂ ಪೀಠ ಸ್ಥಾಪನೆಗೆ ಸ್ಥಳ ಪರಿಶೀಲಿಸಲು ಹೈಕೋರ್ಟ್‌ನ ಮುಖ್ಯ ನ್ಯಾಯಾಧೀಶರು ಶೀಘ್ರವೇ ಮಂಗಳೂರಿಗೆ ಭೇಟಿ ನೀಡಲಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಐವನ್ ಡಿಸೋಜಾ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಚಿಕ್ಕಮಗಳೂರು ಹಾಗೂ ಕೊಡಗು ಜಿಲ್ಲೆಗಳನ್ನು ಒಳಗೊಂಡು ಹೈಕೋರ್ಟ್ ಸಂಚಾರಿ ಪೀಠ ಸ್ಥಾಪನೆಯಾಗಬೇಕೆಂದು ಸತತವಾಗಿ ಹೋರಾಟ ಮಾಡುತ್ತಿದ್ದು, ಇದೀಗ ಬೇಡಿಕೆ ಈಡೇರುವ ಹಂತಕ್ಕೆ ತಲುಪಿದೆ ಎಂದರು. ನಗರದ ಹಳೆಯ ಜಿಲ್ಲಾಧಿಕಾರಿ ಕಚೇರಿಯಲ್ಲಿ ಹೈಕೋರ್ಟ್ ಸಂಚಾರಿ ಪೀಠ ಸ್ಥಾಪಿಸಲು ಅಗತ್ಯವಿರುವ ಮೂಲ ಸೌಕರ್ಯಗಳನ್ನು ಹೈಕೋರ್ಟ್‌ನ ಮುಖ್ಯ ನ್ಯಾಯಾಧೀಶರು ಪರಿಶೀಲಿಸಲಿದ್ದಾರೆ ಎಂದು ಅವರು ಹೇಳಿದರು.

<><><><>

ಬಿಎಸ್‌ಎನ್‌ಎಲ್ ಸುಧಾರಣೆ ಹಾಗೂ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ ಪ್ರಥಮ ಆದ್ಯತೆ ನೀಡಿದೆ ಎಂದು ಉತ್ತರ ಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ ಜೊಯಿಡಾ ತಾಲೂಕಿನ ಬಾಳಶೆಟ್ಟಿಕೊಪ್ಪ ಗ್ರಾಮದಲ್ಲಿ ಬಿಎಸ್‌ಎನ್‌ಎಲ್ ಟವರ್ ಉದ್ಘಾಟಿಸಿ ಮಾತನಾಡಿದ ಅವರು, ಟವರ್‌ಗಳಲ್ಲಿ ಬಳಸಲ್ಪಡುವ ಎಲ್ಲ ತಂತ್ರಜ್ಞಾನಗಳನ್ನು ದೇಶಿಯವಾಗಿಯೇ ಸಿದ್ಧಪಡಿಸಲಾಗಿದೆ ಎಂದರು. ಬಿಎಸ್‌ಎನ್‌ಎಲ್ ನೆಟ್‌ವರ್ಕ್ ಖಾಸಗಿ ಕಂಪನಿಗಳೊಂದಿಗೆ ಗುಣಮಟ್ಟದ ಸೇವೆಯಲ್ಲಿ ಉತ್ತಮ ಪೈಪೋಟಿ ನೀಡಲಾರಂಭಿಸಿದ್ದು, ಕಡಿಮೆ ಕೈಗೆಟಕುವ ದರದಲ್ಲಿ ಸೇವೆಗಳು ಲಭ್ಯವಾಗುತ್ತಿರುವುದರಿಂದ ದೇಶದಲ್ಲಿ ಈಗ ಗ್ರಾಹಕರ ಸಂಖ್ಯೆ ವೃದ್ಧಿಸಲಾರಂಭಿಸಿದೆ ಎಂದು ಹೇಳಿದರು. ಗ್ರಾಮೀಣ ಭಾಗಗಳಲ್ಲೂ ಆನ್‌ಲೈನ್ ಶಿಕ್ಷಣ, ಬ್ಯಾಂಕಿಂಗ್, ಸರ್ಕಾರಿ ಯೋಜನೆಗಳಿಗೆ ನೋಂದಣಿ ಮುಂತಾದವುಗಳಿಗಾಗಿ ಬೇಕಾಗಿರುವ ಸ್ಥಿರವಾದ ೪ಜಿ ಸಂಪರ್ಕ ಸೌಲಭ್ಯಗಳನ್ನು ನೀಡುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಅವರು ತಿಳಿಸಿದರು. ಜಿಲ್ಲೆಯಲ್ಲಿನ ಹಳೆಯ ೨೫೦ ಟವರ್‌ಗಳಲ್ಲಿ ೧೬೩ ಟವರ್‌ಗಳನ್ನು ೪ಜಿಗೆ ಪರಿವರ್ತಿಸಿ ಮೇಲ್ದರ್ಜೆಗೇರಿಸಲಾಗಿದೆ. ಹೊಸ ೧೯೯ ಟವರ್‌ಗಳೆಲ್ಲವೂ ೪ಜಿ ವೇಗದಲ್ಲಿ ಸೇವೆ ನೀಡುತ್ತಿವೆ. ಜಿಲ್ಲೆಯ ಜನರ ಬೇಡಿಕೆಯಂತೆ ಹೊಸದಾಗಿ ೭೫ ಟವರ್‌ಗಳ ಸ್ಥಾಪನೆಗೆ ಕೇಂದ್ರ ಸಚಿವರು ಮಂಜೂರಾತಿ ನೀಡಿದ್ದು, ಈ ಟವರ್‌ಗಳ ಸ್ಥಾಪನೆಗಾಗಿ ಸ್ಥಳ ಪರಿಶೀಲನಾ ಕಾರ್ಯ ಮುಂದುವರೆದಿದೆ ಎಂದರು. ಜಿಲ್ಲೆಯಲ್ಲಿ ಎದುರಾಗುತ್ತಿರುವ ಬ್ಯಾಟರಿ ಬ್ಯಾಕಪ್ ಸಮಸ್ಯೆಯನ್ನು ನೀಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಂಸದರು ತಿಳಿಸಿದರು.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹಾಡೋನಹಳ್ಳಿಯ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ದೊಡ್ಡಬಳ್ಳಾಪುರ ತಾಲ್ಲೂಕಿನ ಕೊಟ್ಟಿಗೆ ಮಾಚೇನಹಳ್ಳಿ ಮತ್ತು ಹೊಸಹಳ್ಳಿ ಗ್ರಾಮದಲ್ಲಿ ಉತ್ತಮ ಈರುಳ್ಳಿ ಇಳುವರಿಗೆ ಜೇನುನೊಣಗಳ ಪರಾಗಸ್ಪರ್ಶಕ್ರಿಯೆ ಮುಂಚೂಣಿ ಪ್ರಾತ್ಯಕ್ಷಿಕೆಯನ್ನು ಆಯೋಜಿಸಲಾಗಿತ್ತು. ಕೃಷಿ ವಿಜ್ಞಾನ ಕೇಂದ್ರದ ಜೇನು ಕೃಷಿ ತಜ್ಞ ಡಾ.ಈಶ್ವರಪ್ಪ ಮಾತನಾಡಿ, ಈರುಳ್ಳಿ ಬೆಳೆಯಲ್ಲಿ ಪರಕೀಯ ಪರಾಗ ಸ್ಪರ್ಶವು ಅವಶ್ಯಕತೆಯಿರುವುದರಿಂದ ಜೇನು ನೊಣಗಳ ಹೂಗಳಿಂದ ಹೂಗಳಿಗೆ ಪರಾಗವನ್ನು ಸಾಗಿಸಿ ಪರಿಣಾಮಕಾರಿಯಾಗಿ ಪರಾಗಸ್ಪರ್ಶ ನಡೆಸಿದಾಗ ಪ್ರತಿಹೂಗುಚ್ಛದಿಂದ ಹೆಚ್ಚಿನ ಬೀಜ ಉತ್ಪಾದನೆ ಸಾಧ್ಯವಾಗುತ್ತದೆ ಎಂದು ಮಾಹಿತಿ ನೀಡಿದ್ದಾರೆ.

<><><>

ಕೋಲಾರ ಜಿಲ್ಲಾ ಹಾಲು ಒಕ್ಕೂಟದ ಮೊಸರು ಮಾರಾಟದಲ್ಲಿ ಶೇಕಡ ೩.೪೨ರಷ್ಟು ಮತ್ತು ಯು.ಹೆಚ್.ಟಿ ಹಾಲಿನ ಮಾರಾಟವು ಶೇಕಡ ೪.೭೨ ರಷ್ಟು ಹೆಚ್ಚಳವಾಗಿದೆ ಎಂದು ಕೋಮುಲ್ ಅಧ್ಯಕ್ಷ ಕೆ.ವೈ.ನಂಜೇಗೌಡ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಹಾಲು ಶೇಖರಣೆ ೯ ಲಕ್ಷದ ೮೭ ಸಾವಿರದ ೯೩೪ ಲೀಟರ್‌ನಿಂದ ೧೧ ಲಕ್ಷದ ೨೯ ಸಾವಿರದ ೭೭೧ ಲೀಟರ್‌ಗೆ ಏರಿಕೆಯಾಗಿದ್ದು ಶೇಕಡ ೧೮.೭೨ರಷ್ಟು ಹೆಚ್ಚಾಗಿದೆ ಎಂದರು.

<><><>

ಕೊಪ್ಪಳ ಜಿಲ್ಲೆ ಗಂಗಾವತಿ ನಗರದಲ್ಲಿ ನೂತನವಾಗಿ ನಿರ್ಮಾಣವಾಗಲಿರುವ ಜಿಲ್ಲಾ ಮಟ್ಟದ ಕೆ.ಕೆ.ಆರ್.ಟಿ.ಸಿ ಸ್ಯಾಟಲೈಟ್ ಬಸ್ ನಿಲ್ದಾಣದ ಕಾಮಗಾರಿಗೆ ಶಾಸಕ ಜಿ.ಜನಾರ್ದನ ರೆಡ್ಡಿ ಇಂದು ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಮಾತನಾಡಿದ ಶಾಸಕರು, ಒಟ್ಟು ೧೭.೫ ಕೋಟಿ ರೂಪಾಯಿ ಅನುದಾನದಲ್ಲಿ ಈ ಯೋಜನೆ ಅನುಷ್ಠಾನಗೊಳ್ಳುತ್ತಿದ್ದು, ಗಂಗಾವತಿಯ ಅಭಿವೃದ್ಧಿಯ ದೃಷ್ಟಿಯಿಂದ ಒಂದು ಪ್ರಮುಖ ಮೈಲಿಗಲ್ಲಾಗಿದೆ ಎಂದರು. ಈ ನಿಲ್ದಾಣದಿಂದ ಮುಂದಿನ ದಿನಗಳಲ್ಲಿ ಸಾರ್ವಜನಿಕರಿಗೆ ಮತ್ತು ಪ್ರಯಾಣಿಕರಿಗೆ ಅತ್ಯುತ್ತಮ ಸಾರಿಗೆ ಸೌಲಭ್ಯ ಲಭ್ಯವಾಗಲಿದೆ ಎಂದು ಶಾಸಕರು ತಿಳಿಸಿದರು.

<><><>

ರಾಜ್ಯಾದ್ಯಂತ ಮುಂದಿನ ಏಳು ದಿನಗಳ ಕಾಲ, ಒಣ ಹವೆ ಹಾಗೂ ಬಿಸಿಲಿನ ವಾತಾವರಣ ಮುಂದುವರಿಯಲಿದೆ. ಮಧ್ಯಾಹ್ನದ ನಂತರ, ವಿವಿಧೆಡೆಗಳಲ್ಲಿ ಮೋಡ ಕವಿದ ವಾತಾವರಣದ ಸಾಧ್ಯತೆಯಿದ್ದು, ಅಲ್ಲಲ್ಲಿ ಗುಡುಗು, ಸಿಡಿಲು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>